5293

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2013

ಸದಸ್ಯರ ಹೆಸರು : ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 17-03-2022

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸುತ ರಾಜ್ಯ ಸರ್ಕಾರಿ ನೌಕರರಿಗೆ ಎಷ್ಟನೇ ವೇತನ ಆಯೋಗವನ್ನು ನೀಡಲಾಗಿದೆ; ಮತ್ತು ಯಾವಾಗ ನೀಡಲಾಗಿದೆ (ವಿವರ ನೀಡುವುದು) | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ ರಾಜ್ಯ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ರಚಿಸಲಾಗಿದ್ದ 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳ ಪ್ರಕಾರ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ದಿನಾಂಕ: 01-07-2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲಾಗಿರುತ್ತದೆ.<br><br>ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ಕೇಂದ್ರ ವೇತನ ಆಯೋಗಗಳ ಶಿಫಾರಸ್ಸು ಹಾಗೂ ಕೇಂದ್ರ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ತನ್ನದೇ ಆದ ವೇತನ ಆಯೋಗ/ ವೇತನ ಸಮಿತಿಗಳಂತಹ ತಜ್ಞ ಸಮಿತಿಗಳ ಶಿಫಾರಸ್ಸಿನ ಮೇರೆಗೆ ತನ್ನದೇ ಆದ ವಿಶಿಷ್ಟ ವೇತನ ರಚನೆಯನ್ನು ಅಳವಡಿಸಿಕೊಂಡಿದ್ದು, ಅದನ್ನು ಕಾಲದಿಂದ ಕಾಲಕ್ಕೆ ಅಂದರೆ ಸಾಮಾನ್ಯವಾಗಿ 6 ವರ್ಷಗಳು ಅಥವಾ ಹೆಚ್ಚು ಅವಧಿಯಲ್ಲಿ ಪರಿಷ್ಕರಿಸಿಕೊಂಡು ಬಂದಿರುತ್ತದೆ. |
| (ಆ) | ಎಷ್ಟು ವರ್ಷಗಳಿಗೊಮ್ಮೆ ವೇತನ ಆಯೋಗವನ್ನು ರಚಿಸಲಾಗುವುದು; ವಿವರ ನೀಡುವುದು | |
| (ಇ) | ರಾಜ್ಯ ಮತ್ತು ಕೇಂದ್ರ ಸರ್ಕಾರಿ ನೌಕರರ ನಡುವೆ ವೇತನ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಪ್ರಮಾಣದ ತಾರತಮ್ಯ ಇದೆ; (ವಿವರ ನೀಡುವುದು) | |
| (ಈ) | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಲು 7ನೇ ವೇತನ ಆಯೋಗವನ್ನು ಯಾವಾಗ ರಚಿಸಲಾಗುವುದು (ವಿವರ ನೀಡುವುದು) | |



Generated from eOffice by G JAGADEESHA, CMO-JS(GJ), JOINT SECREATRY, CMO on 15/03/2022 02:27 PM

| | | |
|---|---|---|
| | | ಆದುದರಿಂದ, ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೇಂದ್ರ ವೇತನ ಆಯೋಗದ ಶಿಫಾರಸ್ಸುಗಳು ರಾಜ್ಯ ಸರ್ಕಾರಿ ನೌಕರರಿಗೆ ಅನ್ವಯಿಸುವುದಿಲ್ಲ ಮತ್ತು ಕೇಂದ್ರ ಸರ್ಕಾರದ ಹುದ್ದೆಯ ಸ್ವರೂಪ ಹಾಗೂ ಅವುಗಳಿಗೆ ನಿಗದಿಪಡಿಸಲಾದ ವೇತನ ಶ್ರೇಣಿಗಳನ್ನು ರಾಜ್ಯ ಸರ್ಕಾರದ ಹುದ್ದೆಗಳಿಗೆ ಹೋಲಿಸಲು ಬರುವುದಿಲ್ಲ.<br><br>ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆಯ ವಿಷಯವು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿದ ವಿಷಯವಾಗಿದ್ದು, ಸಂದರ್ಭಾನುಸಾರ ರಾಜ್ಯದ ಆರ್ಥಿಕ ಸ್ಥಿತಿಗತಿಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳಲಾಗುವುದು. |

ಸಂ: ಆಇ 17 ಎಸ್‌ಆರ್‌ಪಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO JS(GJ), JOINT SECRETARY, CMO on 15/03/2022 02:27 PM